# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1057
ಸದಸ್ಯರ ಹೆಸರು : ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ
ಉತ್ತರಿಸುವ ದಿನಾಂಕ : 23-02-2024.
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಲ ಹೊರುವ ಪದ್ಧತಿ ನಿಷೇಧ ಕಾಯ್ದೆ ಉಲ್ಲಂಘಿಸಿ ಮಾನವರಿಂದ ಮಲಗುಂಡಿ ಸ್ವಚ್ಛಗೊಳಿಸುವ ಪ್ರಕರಣಗಳು ಮತ್ತು ತೆಗೆದುಕೊಂಡ ಕ್ರಮಗಳ ಮಾಹಿತಿ ನೀಡುವುದು; | ರಾಜ್ಯದಲ್ಲಿ ಮಲ ಹೊರುವ ಪದ್ಧತಿ ನಿಷೇಧ ಕಾಯ್ದೆಯಡಿ ಉಲ್ಲಂಘನೆಯಾಗಿರುವ 87 ಪ್ರಕರಣಗಳು ಮತ್ತು 42 ಮೃತಪಟ್ಟ ಪ್ರಕರಣಗಳಲ್ಲಿ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲಾಗಿದೆ. ಕೆಲವು ಪ್ರಕರಣಗಳು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆ ಹಂತ ಮತ್ತು ಕೆಲವು ಪ್ರಕರಣಗಳು ತನಿಖೆ ಹಂತಗಳಲ್ಲಿರುತ್ತವೆ. |
| ಆ) | ಮಲ ಹೊರುವ ಪದ್ಧತಿ ಇನ್ನೂ ಜೀವಂತವಾಗಿದ್ದು ಸಮಾಜದಲ್ಲಿ ಚಾಲ್ತಿಯಲ್ಲಿರುವುದರಿಂದ ಈ ಅನಿಷ್ಟ ಪದ್ಧತಿಯನ್ನು ತಡೆಗಟ್ಟುವಲ್ಲಿ/ ನಿರ್ಮೂಲನೆ ಮಾಡುವಲ್ಲಿ ಸರ್ಕಾರವು ತೆಗೆದುಕೊಂಡ ಕ್ರಮಗಳೇನು; | ಮಲ ಹೊರುವ ಪದ್ಧತಿಯನ್ನು ನಿರ್ಮೂಲನೆ ಮಾಡಲು 2013 ರಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾಯ್ದೆ 2013 ನ್ನು ಜಾರಿಗೆ ತರಲಾಗಿದೆ.<br>➢ ರಾಜ್ಯದಲ್ಲಿ ದಿನಾಂಕ :04.01.2013 ರಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗವನ್ನು ಸ್ಥಾಪಿಸಲಾಗಿದೆ.<br>➢ ರಾಜ್ಯದಲ್ಲಿ 7483 ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳನ್ನು ಗುರುತಿಸಲಾಗಿರುತ್ತದೆ.<br>➢ ಮಲಹೊರುವ ಪದ್ಧತಿಯನ್ನು ನಿರ್ಮೂಲನೆ ಮಾಡಲು ಗುರುತಿಸಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳಿಗೆ ಪುನರ್ವಸತಿ ಕಲ್ಪಿಸಲು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗಿದೆ.<br>➢ ರಾಜ್ಯ ಮಟ್ಟದಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯ ಮೇಲುಸ್ತುವಾರಿ ಸಮಿತಿಯನ್ನು ಮತ್ತು ಜಿಲ್ಲಾಧಿಕಾರಿಗಳ ಮಟ್ಟದಲ್ಲಿ ಜಿಲ್ಲಾ ಜಾಗೃತಿ ಸಮಿತಿಗಳನ್ನು ರಚಿಸಲಾಗಿದೆ. ಸದರಿ ಸಮಿತಿಗಳು ಕಾಯ್ದೆ ಅನುಷ್ಠಾನದ ಬಗ್ಗೆ ಕಾಲಕಾಲಕ್ಕೆ ಮೇಲುಸ್ತುವಾರಿ ಮಾಡುತ್ತಿವೆ.<br>➢ ಯಾವುದೇ ವ್ಯಕ್ತಿ ಮ್ಯಾನ್ಯುಯಲ್ ಸ್ಕ್ಯಾವೇಂಜರ್ ಗಳ ಸ್ವಚ್ಛತೆಗಾಗಿ ನೇಮಕಾತಿ ಮಾಡಿದಲ್ಲಿ ಅಂತಹ ವ್ಯಕ್ತಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ಹೂಡಲಾಗುವುದು.<br>➢ ಮಲ ಗುಂಡಿಗಳನ್ನು ಸ್ವಚ್ಛಗೊಳಿಸುವಾಗ ಮೃತಪಟ್ಟ ಅವಲಂಬಿತರಿಗೆ ಪರಿಹಾರ ಧನವನ್ನು ನಿಯಮಾನುಸಾರ ನೀಡಲಾಗುವುದು. |

| | | |
|---|---|---|
| | | ➢ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಪುನರ್ವಸತಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>➢ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯ ನಿಷೇಧ ಹಾಗೂ ಎಂ.ಎಸ್. ಕಾಯ್ದೆಯ ಬಗ್ಗೆ ಅರಿವು ಮೂಡಿಸುವ ಬಗ್ಗೆ ವಿವಿಧ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ.<br>➢ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ತಡೆಗಟ್ಟಲು ರಾಜ್ಯ ಸರ್ಕಾರವು ವಿವಿಧ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸುತ್ತಿದ್ದು, ಪೌರಾಡಳಿತ ನಿರ್ದೇಶನಾಲಯದಿಂದ ಒಟ್ಟು-542, ಬೆಂಗಳೂರು ನಗರ ನೀರು ಸರಬರಾಜು ಮಂಡಳಿವತಿಯಿಂದ ಒಟ್ಟು 240 ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಒಟ್ಟು 81 ವಿವಿಧ ಮಾದರಿಯ ಆಧುನಿಕ ಯಂತ್ರೋಪಕರಣಗಳನ್ನು ಬಳಸಲಾಗುತ್ತಿದೆ. |
| ಇ) | ಮಲ ಹೊರುವ ಪದ್ಧತಿ ನಿಷೇಧಿಸಿ ಕಾಯಿದೆಯನ್ನು ಜಾರಿಗೆ ತಂದರೂ ಅದನ್ನು ಸಮರ್ಪಕವಾಗಿ ಜಾರಿ ಮಾಡದೇ ಆರೋಪಿಗಳಿಗೆ ಶಿಕ್ಷೆಯಾಗುತ್ತಿಲ್ಲವಾದುದರಿಂದ ಈ ಕಾಯ್ದೆ ಜಾರಿಯ ಉದ್ದೇಶ ಈಡೇರಿದೆಯೇ; ಆರೋಪಿಗಳಿಗೆ ಶಿಕ್ಷೆ ನೀಡುವಲ್ಲಿ ಸದರಿ ಕಾಯ್ದೆಯು ಸಮರ್ಪಕವಾಗಿ ಬಳಕೆಯಾಗುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಎಂ.ಎಸ್. ಕಾಯ್ದೆ 2013 ರಡಿ ಉಲ್ಲಂಘನೆಯಾಗಿರುವ ಪ್ರಕರಣಗಳಲ್ಲಿ ಸದರಿ ಕಾಯ್ದೆಯ ಕಲಂ 10 ರಂತೆ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲಾಗುತ್ತಿದೆ. ಮತ್ತು ಮಾನ್ಯ ನ್ಯಾಯಾಲಯದ ಆದೇಶದಂತೆ ಪೋಲೀಸ್ ಅಧಿಕಾರಿಗಳು FIR ಗಳನ್ನು ನೊಂದಾಯಿಸಿ, ತನಿಖೆ ನಡೆಸಿ, ಚಾರ್ಜ್ ಶೀಟ್‌ಗಳನ್ನು ನ್ಯಾಯಾಲಯದಲ್ಲಿ ಸಲ್ಲಿಸುತ್ತಿದ್ದಾರೆ. ಈವರೆವಿಗೂ ಮೇಲ್ಕಂಡ ಕಾಯ್ದೆಯನ್ನು ಉಲ್ಲಂಘಿಸಿರುವ 6 ಪ್ರಕರಣಗಳಲ್ಲಿ ಶಿಕ್ಷೆಯಾಗಿರುತ್ತದೆ. ಸದರಿ ಕಾಯ್ದೆಯ ಅಂಶ-6 ರಂತೆ ಕೆಲವು ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿವೆ. ಆದ್ದರಿಂದ ಸದರಿ ಕಾಯ್ದೆಯು ಸಮರ್ಪಕವಾಗಿ ಬಳಕೆಯಾಗುತ್ತಿದೆ., |
| ಈ) | ಕಾನೂನಾತ್ಮಕ ನಿಷೇಧದ ಹೊರತಾಗಿಯೂ ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಮಲ ತೆಗೆಯುವ/ ಹೊರುವ ಪದ್ಧತಿಯ ಕುರಿತು ಮಾಧ್ಯಮಗಳಲ್ಲಿ ಹಲವು ವರದಿಗಳು ಪ್ರಕಟಗೊಂಡಿರುವುದನ್ನು ಪರಿಗಣಿಸಿ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಲು ಕ್ರಮಕೈಗೊಳ್ಳಲಾಗುವುದೇ; ಈ ಪದ್ಧತಿಯನ್ನು ತಡೆಯಲು ಜನರಲ್ಲಿ ಜಾಗೃತಿ ಮಾಡಿಸುವ ಸಲುವಾಗಿ ಯಾವ ರೀತಿಯ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ; | ಮಾಧ್ಯಮಗಳಲ್ಲಿ ಪ್ರಕಟಗೊಂಡಿರುವ ಪ್ರಕರಣಗಳ ಬಗ್ಗೆ ವಿವರಗಳನ್ನು ಪಡೆದು ಸದರಿ ಕಾಯ್ದೆಯ ಕಲಂ 20ರಲ್ಲಿ ಅಧಿಕಾರ ಪ್ರತ್ಯೋಜಿಸಿರುವ ಅಧಿಕಾರಿಗಳು, ಪ್ರಕರಣಗಳನ್ನು ದಾಖಲಿಸುತ್ತಿದ್ದಾರೆ.<br><br>ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯ ನಿಷೇಧ ಹಾಗೂ ಎಂ.ಎಸ್. ಕಾಯ್ದೆಯ ಬಗ್ಗೆ ಅರಿವು ಮೂಡಿಸುವ ಬಗ್ಗೆ ಪತ್ರಿಕಾ ಪ್ರಕಟಣೆ, ರೇಡಿಯೋ, ಇತರೆ ಪ್ರಚಾರಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ.<br><br>ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ತಡೆಗಟ್ಟಲು ರಾಜ್ಯ ಸರ್ಕಾರವು ವಿವಿಧ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಲು ಆಧುನಿಕ ಯಂತ್ರೋಪಕರಣಗಳನ್ನು ಬಳಸಲಾಗುತ್ತಿದೆ. |

| | | |
|---|---|---|
| ಉ) | ಸ್ವಾತಂತ್ರ್ಯ ಬಂದು 60 ವರ್ಷಗಳ ಬಳಿಕವೂ ನಿರ್ದಿಷ್ಟ ಸಮುದಾಯದಲ್ಲಿ ಜನಿಸಿದ ಜನರು ತನ್ನದಲ್ಲದ ದುರಾದೃಷ್ಟಕ್ಕೆ ಈ ಕೆಲಸ ಮಾಡಬೇಕಿದ್ದು ಇದು ಮಾನವೀಯತೆಗೆ ನಾಚಿಕೆಯಾಗುವ ಸಂಗತಿಯಲ್ಲವೇ? | ಮಲ ಹೊರುವ ಪದ್ಧತಿಯನ್ನು ನಿಷೇಧಿಸುವ ಸಲುವಾಗಿ ಭಾರತ ಸರ್ಕಾರದಿಂದ ಮ್ಯನ್ಯುಯಲ್ ಸ್ಕ್ಯಾವೆಂಜರ್‌ಗಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ 2013ರ ಕಾಯ್ದೆ ಹಾಗೂ ನಿಯಮಗಳನ್ನು ಜಾರಿಗೆ ತಂದು ಅನುಷ್ಠಾನಗೊಳಿಸಲಾಗುತ್ತಿದೆ. |

**No: SWD/60/SDC/2024**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.